**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ವಾದಿ ಪರವಾಗಿ ಶ್ರೀ ಎಸ್.ಆರ್ ವಕೀಲರಿಂದ:**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ವಾದಿ ಪರ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ನಾನು ತಯಾರಿಸಿದ್ದ ಕ್ರಯ ಕರಾರು ಪತ್ರ ದಾಖಲೆಯನ್ನು ಈಗ ನೋಡಿ ಗುರುತಿಸುತ್ತಿದ್ದೇನೆ. ಅದನ್ನು ಈಗಾಗಲೇ ನಿಪಿ–1 ಎಂದು ಗುರುತಿಸಲಾಗಿದೆ. ನನ್ನ ಸಹಿಯನ್ನು ಈಗ ನಿಪಿ–1(ಓ) ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಕರಾರು ಪತ್ರದ ಪಕ್ಷಗಾರರು ಮತ್ತು ಸಾಕ್ಷಿದಾರರುಗಳ ಸಹಿ ಇದ್ದು, ಅವುಗಳನ್ನು ಈಗಾಗಲೇ ನಿಪಿ–1(ಎ) ರಿಂದ (ಎನ್) ಎಂದು ಗುರುತಿಸಲಾಗಿದೆ ಹಾಗೂ ಅವುಗಳನ್ನು ನಾನು ನೋಡಿ ಗುರುತಿಸುತ್ತಿದ್ದೇನೆ.

**ಪಾಟೀ ಸವಾಲು: ಪ್ರತಿವಾದಿಯ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ.**